# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


## "ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಪತ್ರ"

**ವಿಷಯ :** ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಅಕ್ಲೇನಹಳ್ಳಿ – ಮಲ್ಲೇನಹಳ್ಳಿ ಗ್ರಾಮದ ಸ.ನಂ 37/17 ರ ಪೈಕಿ 0ಎ–08ಗು, 37/23 ರ ಪೈಕಿ 8ಎ–2.90ಗು, 37/24 ರ ಪೈಕಿ 9ಎ–30ಗು, 37/26 ರ ಪೈಕಿ 8ಎ–20.93ಗು, 37/28 ರ ಪೈಕಿ 3ಎ–26ಗು, 37/29 ರ ಪೈಕಿ 9ಎ–37ಗು ಹಾಗೂ 37/30 ರಲ್ಲಿ 13ಎ–00ಗು ಒಟ್ಟು 53ಎ–4.83ಗು ಅಥವಾ 214969.05 ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ 'ವಸತಿ' ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ಕೋರಿರುವ ಬಗ್ಗೆ.

**ಉಲ್ಲೇಖ :**

1) ಮೆ॥ ಎಂ.ಎಸ್.ರಾಮಯ್ಯ ವೆಂಚರ್ಸ್ ಎಲ್‌ಎಲ್‌ಪಿ ರ ಪರವಾಗಿ ಅಧಿಕೃತ ಪಾಲುದಾರರಾದ ಶ್ರೀ ಮತ್ತಿಕೆರೆ ರಾಮಯ್ಯ ಜಾನಕೀರಾಮ್, ಶ್ರೀಮತಿ ಅಖಿಲಾ ಜಯರಾಂ & ಶ್ರೀ ಸೌಮಿನ್ ರಾಯ್ ರವರು ಸಲ್ಲಿಸಿರುವ ಅರ್ಜಿ ಸಂಖ್ಯೆ 4765, ದಿನಾಂಕ: 15/11/2024.
2) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಕಛೇರಿ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 55/91–92, ದಿ: 16/04/1992, ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 272/91–92, ದಿ: 30/04/1992, (ಸ.ನಂ 37/17), ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 269/91–92, ದಿ: 29/04/1992, (ಸ.ನಂ 37/23), ಎಎಲ್‌ಎನ್ (ದೇ) ಎಸ್‌ಆರ್/ 31/2004–05, ದಿ: 19/07/2004 (ಸ.ನಂ 37/24), ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 74/91–92, ದಿ: 29/07/1992, ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 75/91–92, ದಿ: 29/07/1992 (ಸ.ನಂ 37/26), ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 78/1991–92, ದಿ: 29/07/1992, ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 79/1991–92, ದಿ: 29/07/1992 (ಸ.ನಂ 37/28), ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 79/1991–92, ದಿ: 29/07/1992, ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 70/1991–92, ದಿ: 29/07/1992, ಬಿಡಿಎಸ್/ಎಎಲ್‌ಎನ್/ ಎಸ್‌ಆರ್ (ದೇ) 80/1991–92, ದಿ: 29/07/1992 (ಸ.ನಂ 37/29), ಎಎಲ್‌ಎನ್ (ದೇ)ಎಸ್‌ಆರ್ 35/2004–05, ದಿ: 19/07/2004 (ಸ.ನಂ 37/30).
3) ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಸಂಬಂಧ ಪೂರ್ವ ಸಮ್ಮತಿಗಾಗಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರಿಗೆ ಕಡತ ಸಲ್ಲಿಸಿದ ದಿನಾಂಕ: 29/11/2024.
4) ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಸಮ್ಮತಿ ನೀಡಿದ ದಿನಾಂಕ: 03/12/2024.
5) ದಿನಾಂಕ: 05/12/2024 ರಂದು ನಡೆದ ಪ್ರಾಧಿಕಾರದ 144 ನೇ ಸಭೆಯ ವಿಷಯ ಸಂ. 144.103 ರ ನಡಾವಳಿ.
6) ಈ ಪ್ರಾಧಿಕಾರದ ಸಮಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 13/01/2025.
7) ಅರ್ಜಿದಾರರು ಪ್ರಾಧಿಕಾರದ ರಶೀದಿ ಸಂಖ್ಯೆ: 0014051, ದಿನಾಂಕ: 28/01/2025 ರಂತೆ ಒಟ್ಟು ರೂ. 2,06,39,060/– (ಎರಡು ಕೋಟಿ ಆರು ಲಕ್ಷದ ಮೂವತ್ತೊಂಭತ್ತು ಸಾವಿರದ ಅರವತ್ತು ರೂಪಾಯಿಗಳು ಮಾತ್ರ) ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.
8) ಈ ಪ್ರಾಧಿಕಾರದ ಸಮಸಂಖ್ಯೆ ಪತ್ರ ದಿನಾಂಕ: 13/01/2025 & 11/02/2025.
9) ಅರ್ಜಿದಾರರ ಮನವಿ ಪತ್ರ ದಿನಾಂಕ: 07/02/2025.
10) ವಸತಿ ಉದ್ದೇಶದ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿ ಉದ್ಯಾನವನ / ಬಫರ್ / ಬಯಲುಜಾಗ ಮತ್ತು ನಾಗರೀಕ ಸೌಲಭ್ಯಗಳಿಗಾಗಿ ಕಾಯ್ದಿರಿಸಿರುವ ಜಾಗಗಳನ್ನು

Housiey.com

ಯೋಜನಾ ಪ್ರಾಧಿಕಾರಕ್ಕೆ ಮತ್ತು ರಸ್ತೆ ಹಾಗೂ ಪಬ್ಲಿಕ್ ಯುಟಿಲಿಟಿ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಣ್ಣೇಶ್ವರ ಗ್ರಾಮ ಪಂಚಾಯಿತಿ ರವರಿಗೆ ಹಸ್ತಾಂತರಿಸಲು ಸೂಚಿಸಿ ದೃಢೀಕರಿಸಿರುವ ಪತ್ರ ದಿನಾಂಕ: 17/02/2025.

11) ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಉದ್ಯಾನವನ / ಬಫರ್ / ಬಯಲುಜಾಗ ಮತ್ತು ನಾಗರೀಕ ಸೌಲಭ್ಯಗಳಿಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಉಪನೋಂದಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ (ದೇವನಹಳ್ಳಿ) ರವರ 1 ನೇ ಪುಸ್ತಕದ ದಸ್ತಾವೇಜು ನಂಬರ್ ಡಿಎನ್‌ಹೆಚ್-1-19485/2024-25 ಆಗಿ ದಿನಾಂಕ: 19/02/2025 ರಂದು ಈ ಪ್ರಾಧಿಕಾರಕ್ಕೆ ಮತ್ತು ರಸ್ತೆ ಹಾಗೂ ಪಬ್ಲಿಕ್ ಯುಟಿಲಿಟಿ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಉಪನೋಂದಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ (ದೇವನಹಳ್ಳಿ) ರವರ 1 ನೇ ಪುಸ್ತಕದ ದಸ್ತಾವೇಜು ನಂಬರ್ ಡಿಎನ್‌ಹೆಚ್-1-19995/2024-25 ಆಗಿ ದಿನಾಂಕ: 01/03/2025 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಣ್ಣೇಶ್ವರ ಗ್ರಾಮ ಪಂಚಾಯಿತಿ ರವರಿಗೆ ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸಿ ವಿದ್ಯುನ್ಮಾನ ಮಾದರಿಯಲ್ಲಿ ಕೇಂದ್ರಿತ ದತ್ತಾಂಶ ಕೋಶದಲ್ಲಿ ಶೇಖರಿಸಲಾಗಿರುವ ಪತ್ರದ ಪ್ರತಿಗಳನ್ನು ಹಾಗೂ ಅಭಿವೃದ್ಧಿ ಯೋಜನಾ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿರುವ ಮನವಿ ಪತ್ರ ದಿನಾಂಕ: 03/03/2025.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೆ॥ ಎಂ.ಎಸ್.ರಾಮಯ್ಯ ವೆಂಚರ್ಸ್ ಎಲ್‌ಎಲ್‌ಪಿ ರ ಪರವಾಗಿ ಅಧಿಕೃತ ಪಾಲುದಾರರಾದ ಶ್ರೀ ಮತ್ತಿಕೆರೆ ರಾಮಯ್ಯ ಜಾನಕೀರಾಮ್, ಶ್ರೀಮತಿ ಅಖಿಲಾ ಜಯರಾಂ & ಶ್ರೀ ಸೌಮಿನ್ ರಾಯ್ ಇವರುಗಳು ಉಲ್ಲೇಖ (1) ರಂತೆ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಅಕ್ಲೇನಹಳ್ಳಿ - ಮಲ್ಲೇನಹಳ್ಳಿ ಗ್ರಾಮದ ಸ.ನಂ 37/17 ರ ಪೈಕಿ 0ಎ-08ಗು, 37/23 ರ ಪೈಕಿ 8ಎ-2.90ಗು, 37/24 ರ ಪೈಕಿ 9ಎ-30ಗು, 37/26 ರ ಪೈಕಿ 8ಎ-20.93ಗು, 37/28 ರ ಪೈಕಿ 3ಎ-26ಗು, 37/29 ರ ಪೈಕಿ 9ಎ-37ಗು ಹಾಗೂ 37/30 ರಲ್ಲಿ 13ಎ-00ಗು ಒಟ್ಟು 53ಎ-4.83ಗು ಅಥವಾ 214969.05 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಶ್ನಿತ ಜಮೀನುಗಳು ಸರ್ಕಾರದಿಂದ ಅನುಮೋದನೆಯಾಗಿರುವ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ - 2021 ರಲ್ಲಿ ವಸತಿ, ಭಾಗಶಃ ಉದ್ಯಾನವನ, 18.00 ಮೀ ಅಗಲದ ಪ್ರಸ್ತಾಪಿತ ರಸ್ತೆ & 60.00 ಮೀ ಅಗಲದ ಏರ್‌ಪೋರ್ಟ್ ರಸ್ತೆ ಪಂಕ್ತೀಕರಣ ಭೂಉಪಯೋಗ ವಲಯದಲ್ಲಿ ಇರುತ್ತದೆ. ಸಲ್ಲಿಸಿರುವ ಸರ್ವೆ & ಗ್ರಾಮ ನಕ್ಷೆಯನ್ವಯ ಪ್ರಸ್ತಾಪಿತ ಜಮೀನುಗಳ ಉತ್ತರ ಭಾಗದಲ್ಲಿ ಹಾಲಿ ಏರ್‌ಪೋರ್ಟ್‌ಗೆ ಹೋಗಲು ಇರುವ ರಸ್ತೆ ಇದ್ದು, ಅನುಮೋದಿತ ಮಹಾಯೋಜನಯ-2021 ರನ್ವಯ ಪ್ರಶ್ನಿತ ಜಮೀನುಗಳಲ್ಲಿಯೇ ರಸ್ತೆ ಹಾದು ಹೋಗುತ್ತಿರುವುದಾಗಿ ಗುರುತಿಸಿದ್ದು, ಹಾಲಿ ರಸ್ತೆಯು ಅನುಮೋದಿತ ಮಹಾಯೋಜನೆಯ ನಕ್ಷೆಯಲ್ಲಿ ರಸ್ತೆ ಪಂಕ್ತೀಕರಣ (ಪರಿಚಲನೆ) ವ್ಯತ್ಯಾಸವಾಗಿರುತ್ತದೆ. ಇಂತಹ ನ್ಯೂನ್ಯತೆಗಳಿದ್ದಲ್ಲಿ ವಲಯ ನಿಯಮಾವಳಿಯನ್ವಯ ಪುಟ ಸಂಖ್ಯೆ (75) ರಲ್ಲಿನ ಕಂಡಿಕೆ 'ಜೆ' ರಲ್ಲಿ If the alignment of the existing Road is shifted in the master plan, the existing road as on ground reality/ cadastral map may be considered for the proposed road widening. The land use facing the Road shall be considered accordingly ಎಂದು ಸೂಚಿಸಲಾಗಿರುತ್ತದೆ. ಅದರಂತೆ ಪ್ರಶ್ನಿತ ಜಮೀನುಗಳನ್ನು ವಸತಿ, ಭಾಗಶಃ ಉದ್ಯಾನವನ & 18.00 ಮೀ ಅಗಲದ ಪ್ರಸ್ತಾಪಿತ ರಸ್ತೆ ಪಂಕ್ತೀಕರಣ ಭೂಉಪಯೋಗ ವಲಯವೆಂದು ಹಾಗೂ 60.00 ಮೀ ಅಗಲದ ಏರ್‌ಪೋರ್ಟ್ ರಸ್ತೆಯನ್ನು ಹಾಲಿ ಅಭಿವೃದ್ಧಿಯಾಗಿರುವ ರಸ್ತೆ ಪಂಕ್ತೀಕರಣದಲ್ಲಿ ಪರಿಗಣಿಸಲಾಗಿದೆ. ಉಲ್ಲೇಖ (2) ರ ಅಧಿಕೃತ ಜ್ಞಾಪನ ಪತ್ರಗಳಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಂದ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಯಾಗಿರುತ್ತದೆ. ಪ್ರಶ್ನಿತ ಜಮೀನುಗಳು ಕಂದಾಯ ಇಲಾಖೆಯಿಂದ ದಿನಾಂಕ: 17/09/2004 ರ ಪೂರ್ವದಲ್ಲಿ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಗೊಂಡಿದ್ದು, ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 157 ಬಿಎಂಆರ್

2005 ದಿನಾಂಕ: 27-01-2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29-01-2009 ರಲ್ಲಿ ದಿನಾಂಕ: 17/09/2004 ಕ್ಕಿಂತ ಮುಂಚೆ ಭೂಪರಿವರ್ತನೆಯಾಗಿರುವ ಎಲ್ಲಾ ಪ್ರಕರಣಗಳನ್ನು ಆಯಾಯ ಉದ್ದೇಶಗಳಿಗೆ ಸಂರಕ್ಷಿಸಲು ನಿರ್ದೇಶಿಸಲಾಗಿರುತ್ತದೆ. ಅದರಂತೆ ಸದರಿ ವಸತಿ ಅಭಿವೃದ್ಧಿ ನಕ್ಷೆಯ ಪ್ರಕರಣದಲ್ಲಿ ದಿನಾಂಕ: 17/09/2004 ರ ಪೂರ್ವದಲ್ಲಿ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಗೊಂಡಿರುವುದರಿಂದ 'ವಸತಿ' ಉದ್ದೇಶಕ್ಕೆ ಸಂರಕ್ಷಣೆ ಆಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ : ಯುಡಿಡಿ234ಬಿಎಂಆರ್2023, ದಿನಾಂಕ: 20/11/2023 ರಂತೆ ಅನುಮೋದನಯಾದ ಬಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಯಮಗಳು 2020 ರಲ್ಲಿನ ನಿಯಮ 18 (5) ರನ್ವಯ ಮತ್ತು ದಿನಾಂಕ: 27/12/2023 & 03/02/2024 ರಂದು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಅಧಿಕೃತ ಜ್ಞಾಪನಾ ಪತ್ರದಲ್ಲಿ ಸೂಚಿಸಿರುವಂತೆ ಸದರಿ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಸಂಬಂಧ ಪೂರ್ವ ಸಮ್ಮತಿಗಾಗಿ ಉಲ್ಲೇಖ (3) ರಲ್ಲಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರನ್ನು ಕೋರಲಾಗಿದ್ದು, ಉಲ್ಲೇಖ (4) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಹಲವು ಷರತ್ತುಗಳಿಗೆ ಒಳಪಟ್ಟು ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ಸಮ್ಮತಿ ನೀಡಿರುತ್ತಾರೆ.

ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (5) ರಲ್ಲಿನ ದಿನಾಂಕ: 05/12/2024 ರಂದು ನಡೆದ ಪ್ರಾಧಿಕಾರದ 144 ನೇ ಸಭೆಯ ವಿಷಯ ಸಂ. 144.103 ರ ನಡಾವಳಿಯಲ್ಲಿ ಪ್ರಸ್ತಿತ ಅಭಿವೃದ್ಧಿ ಯೋಜನಾ ನಕ್ಷೆಗೆ ಸಂಬಂಧಿಸಿದಂತೆ ಬೆಂಗಳೂರು ಮೆಟ್ರೋ ರೈಲ್ವೆ ಇಲಾಖೆಯ ನಿರಾಕ್ಷೇಪಣಾ ಪತ್ರ ಪಡೆದುಕೊಂಡು, ಅರ್ಜಿದಾರರು ಸಲ್ಲಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಅವಶ್ಯವಿದ್ದಲ್ಲಿ ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ಪರಿಷ್ಕರಿಸಿಕೊಂಡು ನಂತರ, ಯೋಜನಾ ಪ್ರಾಧಿಕಾರದ ಸಾಮಾನ್ಯ ಷರತ್ತುಗಳಿಗೆ ಒಳಪಟ್ಟು, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಅಕ್ಲೇನಹಳ್ಳಿ – ಮಲ್ಲೇನಹಳ್ಳಿ ಗ್ರಾಮದ ಸ.ನಂ 37/17 ರ ಪೈಕಿ 0ಎ-08ಗು, 37/23 ರ ಪೈಕಿ 8ಎ-2.90ಗು, 37/24 ರ ಪೈಕಿ 9ಎ-30ಗು, 37/26 ರ ಪೈಕಿ 8ಎ-20.93ಗು, 37/28 ರ ಪೈಕಿ 3ಎ-26ಗು, 37/29 ರ ಪೈಕಿ 9ಎ-37ಗು ಹಾಗೂ 37/30 ರಲ್ಲಿ 13ಎ-00ಗು ಒಟ್ಟು 53ಎ-4.83ಗು ಅಥವಾ 214969.05 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ' ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಉಲ್ಲೇಖ (6) ರ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ನಿಗಧಿತ ಶುಲ್ಕಗಳನ್ನು ಪಾವತಿಸಲು ಹಾಗೂ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಲಾಗಿರುವ ಹಿನ್ನೆಲೆಯಲ್ಲಿ ಉಲ್ಲೇಖ (7) ರಂತೆ ನಿಗಧಿತ ಶುಲ್ಕಗಳನ್ನು ಪಾವತಿಸಿ, ಅಗತ್ಯ ದಾಖಲೆಗಳನ್ನು ಸಲ್ಲಿಸಿರುತ್ತಾರೆ.

ಉಲ್ಲೇಖ (8) ರ ಪ್ರಾಧಿಕಾರದ ಪತ್ರಗಳಲ್ಲಿ ಪ್ರಸ್ತಿತ ಪ್ರದೇಶವು ನಾಗವಾರದಿಂದ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶಕ್ಕೆ ಉದ್ದೇಶಿಸಿರುವ ಮೆಟ್ರೋ ಮಾರ್ಗಕ್ಕೆ ಹಾಗೂ ಟ್ರಂಪೆಟ್ ಜಂಕ್ಷನ್‌ನ ನಿಲ್ದಾಣಕ್ಕೆ ಹೊಂದಿಕೊಂಡಿರುವುದರಿಂದ ಅರ್ಜಿದಾರರ ಕೋರಿಕೆಯಂತೆ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಅಕ್ಲೇನಹಳ್ಳಿ – ಮಲ್ಲೇನಹಳ್ಳಿ ಗ್ರಾಮದ ಸ.ನಂ 37/17 ರ ಪೈಕಿ 0ಎ-08ಗು, 37/23 ರ ಪೈಕಿ 8ಎ-2.90ಗು, 37/24 ರ ಪೈಕಿ 9ಎ-30ಗು, 37/26 ರ ಪೈಕಿ 8ಎ-20.93ಗು, 37/28 ರ ಪೈಕಿ 3ಎ-26ಗು, 37/29 ರ ಪೈಕಿ 9ಎ-37ಗು ಹಾಗೂ 37/30 ರಲ್ಲಿ 13ಎ-00ಗು ಒಟ್ಟು 53ಎ-4.83ಗು ಅಥವಾ 214969.05 ಚ.ಮೀ ವಿಸ್ತೀರ್ಣ ಪ್ರದೇಶದ 'ವಸತಿ' ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಸಂಬಂಧ ಬೆಂಗಳೂರು ಮೆಟ್ರೋ ರೈಲ್ವೆ ನಿಗಮ ನಿಯಮಿತದ ನಿರಾಕ್ಷೇಪಣಾ ಪತ್ರ ನೀಡಲು ಕೋರಲಾಗಿತ್ತು. ಅರ್ಜಿದಾರರು ಉಲ್ಲೇಖ (9) ರ ಮನವಿ ಪತ್ರದೊಂದಿಗೆ ನೋಟರೀಕೃತ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿ ಮೆಟ್ರೋ ರೈಲ್ವೆ ನಿಗಮ ನಿಯಮಿತ ರವರಿಂದ ನಿರಾಕ್ಷೇಪಣಾ ಪತ್ರ ಪಡೆಯಲು ವಿಳಂಭವಾಗಿರುವುದರಿಂದ ಆರ್ಥಿಕವಾಗಿ ಸಂಕಷ್ಟ ಎದುರಿಸುತ್ತಿದ್ದು, ಪ್ರಸ್ತಿತ ಅಭಿವೃದ್ದಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಸಂಬಂಧ, ಬೆಂಗಳೂರು ಮೆಟ್ರೋ ರೈಲ್ವೇ ನಿಗಮ ನಿಯಮಿತ ರವರಿಂದ ನಿರಾಕ್ಷೇಪಣಾ ಪತ್ರವನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಉಲ್ಲೇಖ (10) ರ ಯೋಜನಾ ಪ್ರಾಧಿಕಾರದ ಪತ್ರದಲ್ಲಿ ವಸತಿ ಉದ್ದೇಶದ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿ ಉದ್ಯಾನವನ / ಬಫರ್ / ಬಯಲುಜಾಗ ಮತ್ತು ನಾಗರೀಕ ಸೌಲಭ್ಯಗಳಿಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಯೋಜನಾ

ಪ್ರಾಧಿಕಾರಕ್ಕೆ ಮತ್ತು ರಸ್ತೆ ಹಾಗೂ ಪಬ್ಲಿಕ್ ಯುಟಿಲಿಟಿ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಣ್ಣೇಶ್ವರ ಗ್ರಾಮ ಪಂಚಾಯಿತಿ ರವರಿಗೆ ಹಸ್ತಾಂತರಿಸಲು ದೃಢೀಕರಿಸಿರುವ ಹಿನ್ನೆಲೆಯಲ್ಲಿ ಅರ್ಜಿದಾರರು ಉಲ್ಲೇಖ (11) ರ ಮನವಿ ಪತ್ರದೊಂದಿಗೆ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಉದ್ಯಾನವನ / ಬಫರ್ / ಬಯಲುಜಾಗ ಮತ್ತು ನಾಗರೀಕ ಸೌಲಭ್ಯಗಳಿಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಉಪನೋಂದಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ (ದೇವನಹಳ್ಳಿ) ರವರ 1 ನೇ ಪುಸ್ತಕದ ದಸ್ತಾವೇಜು ನಂಬರ್ ಡಿಎನ್‌ಹೆಚ್–1–19485/2024–25 ಆಗಿ ದಿನಾಂಕ: 19/02/2025 ರಂದು ಈ ಪ್ರಾಧಿಕಾರಕ್ಕೆ ಮತ್ತು ರಸ್ತೆ ಹಾಗೂ ಪಬ್ಲಿಕ್ ಯುಟಿಲಿಟಿ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಉಪನೋಂದಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ (ದೇವನಹಳ್ಳಿ) ರವರ 1 ನೇ ಪುಸ್ತಕದ ದಸ್ತಾವೇಜು ನಂಬರ್ ಡಿಎನ್‌ಹೆಚ್–1–19995/2024–25 ಆಗಿ ದಿನಾಂಕ: 01/03/2025 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಣ್ಣೇಶ್ವರ ಗ್ರಾಮ ಪಂಚಾಯಿತಿ ರವರಿಗೆ ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸಿ ವಿದ್ಯುನ್ಮಾನ ಮಾದರಿಯಲ್ಲಿ ಕೇಂದ್ರಿತ ದತ್ತಾಂಶ ಕೋಶದಲ್ಲಿ ಶೇಖರಿಸಲಾಗಿರುವ ಪತ್ರದ ಪ್ರತಿಗಳನ್ನು ಹಾಗೂ ಅಭಿವೃದ್ಧಿ ಯೋಜನಾ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿ, ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27/01/2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29/01/2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳ ಅನುಸಾರ ಹಾಗೂ ಉಲ್ಲೇಖ (5) ರಂದು ನಡೆದ ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಅಕ್ಲೇನಹಳ್ಳಿ – ಮಲ್ಲೇನಹಳ್ಳಿ ಗ್ರಾಮದ ಸ.ನಂ 37/17 ರ ಪೈಕಿ 0ಎ–08ಗು, 37/23 ರ ಪೈಕಿ 8ಎ–2.90ಗು, 37/24 ರ ಪೈಕಿ 9ಎ–30ಗು, 37/26 ರ ಪೈಕಿ 8ಎ–20.93ಗು, 37/28 ರ ಪೈಕಿ 3ಎ–26ಗು, 37/29 ರ ಪೈಕಿ 9ಎ–37ಗು ಹಾಗೂ 37/30 ರಲ್ಲಿ 13ಎ–00ಗು ಒಟ್ಟು 53ಎ–4.83ಗು ಅಥವಾ 214969.05 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಸಂಬಂಧ ಕೆಳಕಂಡಂತೆ ಆದೇಶಿಸಿದೆ.

## ಆದೇಶ

**ಸಂ. ಬಿಐಎಪಿಎ/ಟಿಪಿ/ಎಲ್‌ಎಒ/ಡಿಪಿ/91/2024–25** | 3245 **ದಿನಾಂಕ:** – 6 MAR 2025

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ದಿನಾಂಕ: 05/12/2024 ರಂದು ನಡೆದ ಪ್ರಾಧಿಕಾರದ 144 ನೇ ಸಭೆಯ ವಿಷಯ ಸಂ. 144.103 ರ ನಡಾವಳಿಯ ರೀತ್ಯ, ಹಾಗೂ ಅನುಮೋದಿತ ಮಹಾಯೋಜನೆಯ ವಲಯನಿಯಮಾವಳಿಗಳನ್ವಯ, ಪ್ರಶ್ನಿತ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಸೂಚಿಸಲಾದ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಕಟ್ಟಡ ನಕ್ಷೆಗಳಿಗೆ ಅನುಮೋದನೆ ಪಡೆಯುವ ಪೂರ್ವದಲ್ಲಿ ಬೆಂಗಳೂರು ಮೆಟ್ರೋ ರೈಲ್ವೇ ನಿಗಮ ನಿಯಮಿತ ರವರಿಂದ ನಿರಾಕ್ಷೇಪಣಾ ಪತ್ರವನ್ನು ಕಡ್ಡಾಯವಾಗಿ ಪಡೆದು ಸಲ್ಲಿಸುವ ಷರತ್ತಿಗೊಳಪಟ್ಟು, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಅಕ್ಲೇನಹಳ್ಳಿ – ಮಲ್ಲೇನಹಳ್ಳಿ ಗ್ರಾಮದ ಸ.ನಂ 37/17 ರ ಪೈಕಿ 0ಎ–08ಗು, 37/23 ರ ಪೈಕಿ 8ಎ–2.90ಗು, 37/24 ರ ಪೈಕಿ 9ಎ–30ಗು, 37/26 ರ ಪೈಕಿ 8ಎ–20.93ಗು, 37/28 ರ ಪೈಕಿ 3ಎ–26ಗು, 37/29 ರ ಪೈಕಿ 9ಎ–37ಗು ಹಾಗೂ 37/30 ರಲ್ಲಿ 13ಎ–00ಗು ಒಟ್ಟು 53ಎ–4.83ಗು ಅಥವಾ 214969.05 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಪ್ರಕರಣ 15 & 17 ರನ್ವಯ **"ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ"** ಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದಿಸಿದೆ.

**– : ಷರತ್ತುಗಳು :–**

1) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ಪಾವತಿಸುವ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.
2) ಪ್ರಶ್ನಿತ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಸೂಚಿಸಲಾದ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಕಟ್ಟಡ ನಕ್ಷೆಗಳಿಗೆ ಅನುಮೋದನೆ ಪಡೆಯುವ ಪೂರ್ವದಲ್ಲಿ ಬೆಂಗಳೂರು ಮೆಟ್ರೋ ರೈಲ್ವೇ ನಿಗಮ ನಿಯಮಿತ ರವರಿಂದ ನಿರಾಕ್ಷೇಪಣಾ ಪತ್ರವನ್ನು ಕಡ್ಡಾಯವಾಗಿ ಪಡೆದು ಸಲ್ಲಿಸುವ ಷರತ್ತಿಗೊಳಪಟ್ಟಿರುತ್ತದೆ.

Housiey.com

3) ಉದ್ದೇಶಿತ ಯೋಜನೆಗೆ ಅಗತ್ಯವಾಗಿರುವ ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಪೂರೈಕೆ ಬಗ್ಗೆ ಅರ್ಜಿದಾರರು ಖಾತ್ರಿಪಡಿಸಿಕೊಳ್ಳತಕ್ಕದ್ದು.

4) ವಸತಿ ಉಪಯೋಗದ ಅಭಿವೃದ್ಧಿ ಯೋಜನೆಯಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನುಗಳಲ್ಲಿ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು.

5) ಪ್ರಾಧಿಕಾರವು ಅನುಮೋದಿಸಿರುವ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ.

6) ಅನುಮೋದಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗಗಳನ್ನು ಹಾಗೂ ನಾಗರೀಕ ಸೌಲಭ್ಯದ ಪ್ರದೇಶ (ಸಿ.ಎ) ಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಅಭಿವೃದ್ಧಿಪಡಿಸುವುದು.

7) ಅಭಿವೃದ್ಧಿದಾರರು ಉದ್ಯಾನವನ / ಬಯಲುಜಾಗಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳೆಸಿ ಅಭಿವೃದ್ಧಿಪಡಿಸುವುದು.

8) ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪರಿಶೀಲಿಸಿಕೊಳ್ಳತಕ್ಕದ್ದು.

9) ವಿವರವಾದ ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು.

10) ವಲಯ ನಿಯಮಾವಳಿಯಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ನಮೂದಿಸಿರುವ ಉದ್ದೇಶಿತ ಕಟ್ಟಡಗಳ ಬ್ಲಾಕ್‌ಗಳು, ಉಪಗಮನ ರಸ್ತೆ, ಹೈವೇಗಳು, ಉದ್ಯಾನವನ ಮತ್ತು ಖಾಲಿ ಜಾಗಗಳು, ನಾಗರೀಕ ಸೌಕರ್ಯ ಜಾಗಗಳನ್ನು ನಿಗದಿಪಡಿಸಿರುವ ನಕ್ಷೆಯಾಗಿದ್ದು ಎಲ್ಲಾ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಕಟ್ಟಡ ನಕ್ಷೆ ಅನುಮೋದಿಸುವ ಸಂದರ್ಭದಲ್ಲಿ ಸಲ್ಲಿಸತಕ್ಕದ್ದು.

11) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ–2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

12) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ water (Prevention and Control of Pollution) Act 1974 ರ ಕಲಂ 25 ರ ರೀತ್ಯ ಸೂಕ್ತ ಪ್ರಮಾಣದ Sewage Treatment Plant (ತ್ಯಾಜ್ಯನೀರು ಸಂಸ್ಕರಣಾ ಘಟಕ) ಸ್ಥಾಪಿಸಲು Constent for Establishment ಪೂರ್ವಾನುಮತಿ ಪಡೆಯದೇ ಪ್ರಶ್ನಿತ ನಿವೇಶನ / ಜಾಗದಲ್ಲಿ ನೆಲ ಅಗಿಯುವಿಕೆ ಒಳಗೊಂಡಂತೆ ಯಾವುದೇ ರೀತಿಯ ಕಟ್ಟಡ ನಿರ್ಮಾಣ ಅಥವಾ ವಸತಿ ವಿನ್ಯಾಸ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದಲ್ಲ. ಉದ್ದೇಶಿತ ಕಟ್ಟಡ / ನೆಲ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಮುನ್ನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ Constent for Establishment ಅನುಮತಿ ಪಡೆಯತಕ್ಕದ್ದು.

13) ಪ್ರಸ್ತಾವಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಬರುವ ವಸತಿ ಘಟಕಗಳಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿದಾರರು ಒದಗಿಸತಕ್ಕದ್ದು.

14) ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಪೂರ್ವದಲ್ಲಿ ಅಗತ್ಯ ಅಭಿವೃದ್ಧಿ ಶುಲ್ಕವನ್ನು ಯೋಜನಾ ಪ್ರಾಧಿಕಾರಕ್ಕೆ/ಸ್ಥಳೀಯ ಸಂಸ್ಥೆಗೆ ಪಾವತಿಸತಕ್ಕದ್ದು.

15) ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆಯುಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು, ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.

16) ವೈಮಾನಿಕ ಇಲಾಖೆ, ಸ್ಥಳೀಯ ಸಂಸ್ಥೆ, ಬೆಸ್ಕಾಂ ಹಾಗೂ ಕೆ.ಎಸ್.ಪಿ.ಸಿ.ಬಿ. ಮಂಡಳಿ/ ಅವಶ್ಯವಿರುವ ಇತರೆ ಇಲಾಖೆಗಳ ನಿರಾಕ್ಷೇಪಣಾ ಪತ್ರಗಳನ್ನು ಪಡೆದ ನಂತರ ಯೋಜನಾ ಪ್ರಾಧಿಕಾರವು ಕಟ್ಟಡ ನಕ್ಷೆಗಳಿಗೆ ಮಂಜೂರಾತಿ ನೀಡುವುದು.

17) ಅರ್ಜಿದಾರರು ಉದ್ದೇಶಿಸಿರುವ ಜಮೀನುಗಳಲ್ಲಿ ಸರ್ಕಾರಿ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಅನುಮೋದಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

18) ವಸತಿ ಉಪಯೋಗದ ಅಭಿವೃದ್ಧಿ ಯೋಜನೆಯಲ್ಲಿನ ಘನತ್ಯಾಜ್ಯಗಳನ್ನು ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

19) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ನಿರ್ಮಾಣ ಮಾಡತಕ್ಕದ್ದು, ಹಾಗೂ ನೀರಿನ ಹರಿವಿಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತ್ತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂ. ಯುಡಿಡಿ15ಟಿಟಿಪಿ2015, ದಿನಾಂಕ: 21/04/2020 ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling tracks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

20) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು.

21) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31/03/2017 ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹಿರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಮಾಡಿಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

22) ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನುಗಳ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ/ದಾಖಲಾತಿ ನೀಡಿದ್ದಲ್ಲಿ ಅಭಿವೃದ್ಧಿ ಯೋಜನಾ ನಕ್ಷಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ.

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಬಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಸೆಕ್ಷನ್ 15(4) & 17(4) ರಂತೆ ಕ್ರಮ ಕೈಗೊಳ್ಳಲು ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

ಸಹಿ/-
**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

**ರವರಿಗೆ,**

ಮೆ॥ ಎಂ.ಎಸ್.ರಾಮಯ್ಯ ವೆಂಚರ್ಸ್ ಎಲ್ಎಲ್ಪಿ ರ ಪರವಾಗಿ
ಅಧಿಕೃತ ಪಾಲುದಾರರಾದ
ಶ್ರೀ ಮತ್ತಿಕೆರೆ ರಾಮಯ್ಯ ಜಾನಕೀರಾಮ್,
ಶ್ರೀಮತಿ ಅಖಿಲಾ ಜಯರಾಂ & ಶ್ರೀ ಸೌಮಿನ್ ರಾಯ್,
# ಲೆವೆಲ್-10, ಪ್ರೆಸ್ಟೀಜ್ ಒಬ್ಲಿಕ್, ಕಸ್ತೂರ ಬಾ ರಸ್ತೆ,
ಬೆಂಗಳೂರು-560001.

Housiey.com

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

ಪ್ರತಿಯನ್ನು :-

1. ಭೂದಾಖಲೆಗಳ ಸಹಾಯಕ ನಿರ್ದೇಶಕರು, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇವರಿಗೆ ಅನುಮೋದಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯ ಪ್ರತಿಯನ್ನು ಕಳುಹಿಸಿದ್ದು, ದೃಢೀಕೃತ ಸರ್ವೆ ನಕ್ಷೆಯನ್ವಯ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆಗಾಗಿ ಪರಿಗಣಿಸಲಾಗಿದ್ದು, ದೃಢೀಕೃತ ಸರ್ವೆ ನಕ್ಷೆಯಂತೆ ಅನುಗುಣವಾಗಿ ಇಲ್ಲದಿದ್ದಲ್ಲಿ ಅಥವಾ ಯಾವುದೇ ಸರ್ಕಾರಿ ಜಮೀನುಗಳು ಒಳಗೊಂಡಿದ್ದಲ್ಲಿ ಈ ಪ್ರಾಧಿಕಾರಕ್ಕೆ ಮಾಹಿತಿ ನೀಡಲು ಹಾಗೂ ಅನುಮೋದನೆ ನೀಡಲಾದ ಅಭಿವೃದ್ಧಿ ನಕ್ಷೆಯಂತೆ ಯಾವುದೇ ಕೆರೆ / ಖರಾಬು ಒತ್ತುವರಿ ಆಗಿಲ್ಲದೇ ಇರುವ ಬಗ್ಗೆ ಮಾಹಿತಿ ನೀಡಲು ಕೋರಿದೆ. ತಮ್ಮ ವತಿಯಿಂದ ಯಾವುದೇ ಮಾಹಿತಿ ಸ್ವೀಕೃತಗೊಂಡಿಲ್ಲದ ಪಕ್ಷದಲ್ಲಿ ದಾಖಲೆಯಂತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ಸರಿಯಾಗಿರುತ್ತದೆ ಎಂದು ತಿಳಿದು ಮುಂದಿನ ಕ್ರಮಕೈಗೊಳ್ಳಲಾಗುವುದೆಂಬ ಅಂಶವನ್ನು ತಮ್ಮ ಗಮನಕ್ಕೆ ತರಲಾಗಿದೆ.
2. ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು-560027 ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
3. ಹಿರಿಯ ಉಪನೋಂದಣಾಧಿಕಾರಿಗಳು, ದೇವನಹಳ್ಳಿ ತಾಲ್ಲೂಕು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಣ್ಣೇಶ್ವರ ಗ್ರಾಮ ಪಂಚಾಯಿತಿರವರಿಗೆ ಅನುಮೋದಿತ ವಸತಿ ಉಪಯೋಗದ "ಅಭಿವೃದ್ಧಿ ಯೋಜನಾ ನಕ್ಷೆ" ಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.
5. ಕಛೇರಿ ಪ್ರತಿ.

06/03/2025

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

Housiey.com